ಕರ್ನಾಟಕ ವಿಧಾನಸಭೆ

ಹದಿನಾಲ್ಕನೇ ವಿಧಾನಸಭೆ
(ಹದಿಮೂರನೇ ಅಧಿವೇಶನ)
(ಮುಂದುವರೆದ ಉಪವೇಶನಗಳು)

ಕಾರ್ಯಕಲಾಪಗಳ ಪಟ್ಟಿ

ಶುಕ್ರವಾರ, ದಿನಾಂಕ 24ನೇ ಮಾರ್ಚ್, 2017
(ಸಮಯ: ಬೆಳಿಗ್ಗೆ 10.30 ಗಂಟೆಗೆ)

----

1. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಹನ್ನೊಂದನೇ ಪಟ್ಟಿ

ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಹನ್ನೊಂದನೇ ಪಟ್ಟಿ

2. ಸಭೆಯ ಮುಂದಿಡಲಾಗುವ ಕಾಗದ ಪತ್ರಗಳು

ಶ್ರೀ ಸಿದ್ದರಾಮಯ್ಯ (ಮುಖ್ಯಮಂತ್ರಿಗಳು) ಅವರು:

ಭಾರತ ಸಂವಿಧಾನದ 151 (2)ನೇ ಅನುಚ್ಛೇದದ ಮೇರೆಗೆ, ಭಾರತದ ಲೆಕ್ಕನಿಯಂತ್ರಕರು ಮತ್ತು ಮಹಾಲೆಕ್ಕಪರಿಶೋಧಕರು 31ನೇ ಮಾರ್ಚ್, 2016ಕ್ಕೆ ಕೊನೆಗೊಂಡ ವರ್ಷಕ್ಕೆ ನೀಡಿರುವ ರಾಜ್ಯ ಸರ್ಕಾರದ ಹಣಕಾಸಿನ ವ್ಯವಹಾರಗಳ ಮೇಲಿನ ವರದಿಯನ್ನು (2017ನೇ ವರ್ಷದ ವರದಿ ಸಂಖ್ಯೆ–1) ಸಭೆಯ ಮುಂದಿಡುವುದು.

3. ವರದಿಗಳನ್ನೊಪ್ಪಿಸುವುದು

1. **ಶ್ರೀ ಎನ್.ಹೆಚ್. ಶಿವಶಂಕರರೆಡ್ಡಿ** (ಉಪ ಸಭಾಧ್ಯಕ್ಷರು ಹಾಗೂ ಅಧ್ಯಕ್ಷರು, ಅರ್ಜಿಗಳ ಸಮಿತಿ) ಅವರು 2016–17ನೇ ಸಾಲಿನ ಅರ್ಜಿಗಳ ಸಮಿತಿಯ 23ನೇ ವರದಿಯನ್ನೊಪ್ಪಿಸುವುದು.

2. **ಶ್ರೀ ಕೆ. ಶಿವಮೂರ್ತಿ** (ಅಧ್ಯಕ್ಷರು, ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡಗಳ ಕಲ್ಯಾಣ ಸಮಿತಿ) ಅವರು 2016–17 ನೇ ಸಾಲಿನ ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡಗಳ ಕಲ್ಯಾಣ ಸಮಿತಿಯ 7ನೇ ವರದಿಯನ್ನೊಪ್ಪಿಸುವುದು.

3. **ಶ್ರೀ ಕ್ಯಾತಸಂದ್ರ ಎನ್. ರಾಜಣ್ಣ** (ಅಧ್ಯಕ್ಷರು, ಸರ್ಕಾರಿ ಭರವಸೆಗಳ ಸಮಿತಿ) ಅವರು 2016–17ನೇ ಸಾಲಿನ ಸರ್ಕಾರಿ ಭರವಸೆಗಳ ಸಮಿತಿಯ 7ನೇ ಮತ್ತು 8ನೇ ವರದಿಯನ್ನೊಪ್ಪಿಸುವುದು.

4. ವಿತ್ತೀಯ ಕಾರ್ಯಕಲಾಪಗಳು

ಅ) **ಶ್ರೀ ಸಿದ್ದರಾಮಯ್ಯ (ಮುಖ್ಯಮಂತ್ರಿಗಳು)** ಅವರು : 2016–17ನೇ ಸಾಲಿನ ಪೂರಕ ಅಂದಾಜುಗಳನ್ನು (ಮೂರನೇ ಹಾಗೂ ಅಂತಿಮ ಕಂತು) ಮಂಡಿಸುವುದು.

ಆ) "2017–18ನೇ ಸಾಲಿನ ಆಯವ್ಯಯ ಅಂದಾಜುಗಳ ಮೇಲೆ ಮುಂದುವರೆದ ಸಾಮಾನ್ಯ ಚರ್ಚೆ" .

5. ಶಾಸನ ರಚನೆ

ವಿಧೇಯಕವನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು

ಶ್ರೀ ಕಾಗೋಡು ತಿಮ್ಮಪ್ಪ (ಕಂದಾಯ ಸಚಿವರು) ಅವರು :-

ಅ) 2016ನೇ ಸಾಲಿನ ಕರ್ನಾಟಕ ಭೂ ಸುಧಾರಣೆಗಳ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು.

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

ಎಸ್. ಮೂರ್ತಿ
ಕಾರ್ಯದರ್ಶಿ(I/c)

ವಿಧಾನಸಭೆಯ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.
http://kla.kar.nic.in/assembly/lob/lob.htm